ಇ) *ಹಾಗಿದ್ದಲ್ಲಿ ಈ ತೊಂದರೆ ನಿವಾರಿಸಲು ಸರ್ಕಾರದವರು ಕೈಗೊಳ್ಳುತ್ತಿರುವ ಕ್ರಮಗಳೇನು ?*

ಶ್ರೀ ಸಿ. ಬೈರೇಗೌಡ (ಕೃಷಿ ಮತ್ತು ತೋಟಗಾರಿಕೆ ಸಚಿವರು) :

ಅ) ಕೃಷಿ ಇಲಾಖೆಯು ಯಾವುದೇ ಯೋಜನೆಯಡಿಯಲ್ಲಿ ರಿಯಾಯಿತಿ ದರದಲ್ಲಿ ಮೈಲುತುತ್ತವನ್ನು ನೀಡುತ್ತಿಲ್ಲ, ಆದುದರಿಂದ ರೈತರಿಗೆ ಮೈಲುತುತ್ತ ಕೊಡುವುದನ್ನು ನಿಲ್ಲಿಸುವ ಪ್ರಶ್ನೆಯು ಉದ್ಭವಿಸುವುದಿಲ್ಲ.

ಆ) ಇಲಾಖೆಯು ಮೈಲುತುತ್ತವನ್ನು ನಿಷೇಧಿಸಿರುವುದಿಲ್ಲ ಮೈಲುತುತ್ತವು ಮಾರುಕಟ್ಟೆಯಲ್ಲಿ ಯಾವುದೇ ಕೊರತೆಯಿಲ್ಲದೆ ದೊರೆಯುತ್ತಿದೆ.

ಇ) ಉದ್ಭವಿಸುವುದಿಲ್ಲ.

ರಾಜ್ಯದ ಆರ್.ಟಿ.ಓ. ಕಛೇರಿಗಳಲ್ಲಿ ಅವ್ಯವಹಾರ

1777 - ಶ್ರೀ ಯು.ಆರ್. ಸಭಾಪತಿ (ಉಡುಪಿ) : ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ರಾಜ್ಯದಲ್ಲಿ ಕಳೆದ ವರ್ಷಗಳಲ್ಲಿ ಆರ್.ಟಿ.ಓ. ಕಛೇರಿಗಳಲ್ಲಿ ನಡೆದ ಅವ್ಯವಹಾರ ಪ್ರಕರಣಗಳ ಒಟ್ಟು ಸಂಖ್ಯೆ ಎಷ್ಟು ? (ಜಿಲ್ಲಾವಾರು ಮಾಹಿತಿ ಒದಗಿಸುವುದು)*

ಆ) *ಇದರಿಂದ ರಾಜ್ಯ ಬೊಕ್ಕಸಕ್ಕೆ ಆದ ನಷ್ಟ ಎಷ್ಟು ?*

ಇ) *ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳಾವುವು ?*

ಶ್ರೀ ಬಿ.ಎನ್. ಬಚ್ಚೇಗೌಡ (ಸಾರಿಗೆ ಸಚಿವರು) :

ಅ) ರಾಜ್ಯದಲ್ಲಿ ಕಳೆದ ವರ್ಷಗಳಲ್ಲಿ ಪ್ರಾದೇಶಿಕ ಸಾರಿಗೆ ಕಛೇರಿಗಳಲ್ಲಿ ಅವ್ಯವಹಾರ ನಡೆದಿರುವ ನಾಲ್ಕು ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆ.

ಪ್ರಾದೇಶಿಕ ಸಾರಿಗೆ ಕಛೇರಿ ಬೆಂಗಳೂರು, ಬೆಂಗಳೂರು (ಕೇಂದ್ರ) -	1 ಪ್ರಕರಣ
ಪ್ರಾದೇಶಿಕ ಸಾರಿಗೆ ಕಛೇರಿ, ತುಮಕೂರು	1 ಪ್ರಕರಣ
ಸಹಾಯಕ ಪ್ರಾದೇಶಿಕ ಸಾರಿಗೆ ಕಛೇರಿ, ಚಿಕ್ಕಬಳ್ಳಾಪುರ	1 ಪ್ರಕರಣ
ಪ್ರಾದೇಶಿಕ ಸಾರಿಗೆ ಕಛೇರಿ, ಮಂಗಳೂರು (ದಕ್ಷಿಣ ಜಿಲ್ಲೆ)	1 ಪ್ರಕರಣ

ಆ) ಮಧ್ಯಂತರ ಆಡಿಟ್ ವರದಿ ಪ್ರಕಾರ ಇದುವರೆಗೆ ರಾಜ್ಯ ಬೊಕ್ಕಸಕ್ಕೆ ಆದ ಒಟ್ಟು ಅಂದಾಜು ನಷ್ಟ ಸುಮಾರು 1,21,97,370.00 ರೂಪಾಯಿಗಳು ಎಂದು ಅಂದಾಜು ಮಾಡಲಾಗಿದೆ (ಅಂತಿಮ ಮೊತ್ತ ಆಡಿಟ್ ಪೂರ್ಣಗೊಂಡ ಮೇಲೆ ಖಚಿತವಾಗಿ ಹೇಳಬಹುದು)

ಇ)

1. ಅವ್ಯವಹಾರಕ್ಕೆ ಸಂಬಂಧಿಸಿದ ನೌಕರರನ್ನು ಹಾಗೂ ಅಧಿಕಾರಿಗಳನ್ನು ಇಲಾಖಾ ವಿಚಾರಣೆ ಬಾಕಿ ಇಟ್ಟು ಅಮಾನತ್ತುಗೊಳಿಸಲಾಗಿದೆ.

   ಮಂಗಳೂರು ಪ್ರಕರಣಕ್ಕೆ ಸಂಬಂಧಿಸಿದ ನಾಲ್ಕು ಆಪಾದಿತರು, ತುಮಕೂರು ಮತ್ತು ಚಿಕ್ಕಬಳ್ಳಾಪುರದ ಪ್ರಕರಣಗಳಿಗೆ ಸಂಬಂಧಿಸಿದಂತೆ ತಲಾ ಒಬ್ಬರು ಆಪಾದಿತರುಗಳ ವಿರುದ್ಧ ಕ್ರಿಮಿನಲ್ ಮೊಕದ್ದಮೆ ಹೂಡಲಾಗಿದೆ.

   ಬೆಂಗಳೂರು (ಕೇಂದ್ರ) ಪ್ರಾದೇಶಿಕ ಸಾರಿಗೆ ಅಧಿಕಾರಿ ಕಛೇರಿ ಪ್ರಕರಣಕ್ಕೆ ಸಂಬಂಧಿಸಿದ ಆಪಾದಿತರ ವಿರುದ್ಧ ಲೋಕಾಯುಕ್ತ ವಿಚಾರಣೆ ಜರುಗಿಸಲಾಗುತ್ತಿದೆ.

2. ವಿಶೇಷ ಆಡಿಟ್ ನಡೆಸಲು ಕ್ರಮ ತೆಗೆದುಕೊಳ್ಳಲಾಗಿದೆ.

ಸಾರಿಗೆ ಸಂಸ್ಥೆಯಲ್ಲಿ ಕಂಪ್ಯೂಟರ್ ಖರೀದಿ ಮಾಡುವ ಬಗ್ಗೆ ಟೆಂಡರ್ ಕರೆಯುವುದು

1778 - ಶ್ರೀ ಯು.ಆರ್. ಸಭಾಪತಿ (ಉಡುಪಿ) : ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯಲ್ಲಿ ರೂ. 15 ಲಕ್ಷ ಮೊತ್ತದ ಯಾವುದೇ ವಸ್ತುವನ್ನು ಖರೀದಿ ಮಾಡುವಾಗ ಓಪನ್ ಟೆಂಡರ್ ಕರೆಯುವ ಆದೇಶ ಇರುವುದು ನಿಜವೆ?

ಆ) ಹಾಗಿದ್ದಲ್ಲಿ ಕಂಪ್ಯೂಟರ್ ಖರೀದಿ ಮಾಡುವಾಗ ಟೆಂಡರ್ ಕರೆಯದೆ ಅವ್ಯವಹಾರ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಬಂದಿದ್ದಲ್ಲಿ, ಸರ್ಕಾರದವರು ಈ ಬಗ್ಗೆ ತೆಗೆದುಕೊಂಡ ಕ್ರಮಗಳೇನು? (ವಿವರ ನೀಡುವುದು)

ಶ್ರೀ ಬಿ.ಎನ್. ಬಚ್ಚೇಗೌಡ (ಸಾರಿಗೆ ಸಚಿವರು) :

ಅ) ಯಾವುದೇ ಮೊತ್ತದ ವಸ್ತುವನ್ನು ಖರೀದಿ ಮಾಡುವಾಗ ಟೆಂಡರ್ ಕರೆಯಲಾಗುತ್ತದೆ.

ಆ) ಇಲ್ಲ.

ಇ) ಉದ್ಭವಿಸುವುದಿಲ್ಲ.

ಬೆಂಗಳೂರು ದಕ್ಷಿಣ ತಾಲ್ಲೂಕಿನ ಹಳೇ ಬೈರೋಹಳ್ಳಿಯಲ್ಲಿ ಹನಿ ನೀರಾವರಿ ಸಬ್ಸಿಡಿ

1779 - ಶ್ರೀ ಯು.ಆರ್. ಸಭಾಪತಿ (ಉಡುಪಿ) : ಮಾನ್ಯ ಕೃಷಿ ಮತ್ತು ತೋಟಗಾರಿಕೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?